ಸರ್ಕಾರಿ ನೌಕರರ ವರ್ಗಾವಣೆ ನೀತಿ

23(29) -ಶ್ರೀ ಕಟ್ಟಾ ಸುಬ್ರಹ್ಮಣ್ಯ ನಾಯ್ಡು : (ಶಿವಾಜಿನಗರ) ಮಾನ್ಯ ಮುಖ್ಯಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) 2002ನೇ ಸಾಲಿನಲ್ಲಿ ಎಷ್ಟು ಸರ್ಕಾರಿ ನೌಕರರ ವರ್ಗಾವಣೆಯನ್ನು ಮಾಡಲಾಗಿದೆ?

ಆ) ವರ್ಗಾವಣೆಗೆ ಸಂಬಂಧಪಟ್ಟಂತೆ ಹಾರನಹಳ್ಳಿ ರಾಮಸ್ವಾಮಿ ಆಯೋಗವು ನೀಡಿದ ಶಿಫಾರಸ್ಸುಗಳನ್ನು ಸರ್ಕಾರ ಗಣನೆಗೆ ತೆಗೆದುಕೊಂಡಿದೆಯೇ?

ಇ) ವರ್ಗಾವಣೆಗೆ ಸಂಬಂಧಪಟ್ಟಂತೆ ಸರ್ಕಾರ ಹಿಂದೆ ರೂಪಿಸಿದ್ದ ನೀತಿಯನ್ನು ಮಾರ್ಪಾಡು ಮಾಡಲಾಗಿದೆಯೇ?

ಈ) ಹಲವಾರು ಇಲಾಖೆಗಳಲ್ಲಿ ಮನಸ್ಸಿಗೆ ಬಂದ ರೀತಿಯಲ್ಲಿ ವರ್ಗಾವಣೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಉ) ಹಾಗಿದ್ದಲ್ಲಿ, ವರ್ಗಾವಣೆಯಲ್ಲಿ ಆಗಿರತಕ್ಕ ಅನ್ಯಾಯವನ್ನು ಸರಿಪಡಿಸಲು ಸರ್ಕಾರ ಕೈಗೊಳ್ಳುವ ಕ್ರಮಗಳೇನು?

ಊ) ವರ್ಗಾವಣೆಗಳನ್ನು ಅಂತಿಮವಾಗಿ ಯಾವಾಗ ಕೊನೆಗೊಳಿಸಲಾಗುತ್ತಿದೆ?

ಶ್ರೀ ಎಸ್.ಎಂ.ಕೃಷ್ಣ (ಮುಖ್ಯಮಂತ್ರಿಯವರು)

ಅ) 16,830

ಆ) ಹೌದು

ಇ) ಹೌದು, ದಿನಾಂಕ 22-11-2001 ರ ಸರ್ಕಾರಿ ಆದೇಶ ಸಂ.ಡಿಪಿಎಆರ್ 4 ಎಸ್‌ಟಿಆರ್ 2001 ರಲ್ಲಿ ಹೊಸ ವರ್ಗಾವಣೆ ನೀತಿ ಒಳಗೊಂಡಿದೆ.

ಈ) ಇಲ್ಲ.

ಉ) ಮೇಲಿನ 'ಈ' ಪ್ರಶ್ನೆಗೆ ನೀಡಿರುವ ಉತ್ತರದಿಂದ ಇದು ಉದ್ಭವಿಸುವುದಿಲ್ಲ.

ಊ) ಸದರಿ ನೀತಿಯ ಪ್ರಕಾರ ಸರ್ಕಾರಿ ನೌಕರರ ವರ್ಗಾವಣೆಗಳನ್ನು ಏಪ್ರಿಲ್ ಮತ್ತು ಮೇ ತಿಂಗಳಿನಲ್ಲಿ ಮಾತ್ರ ಮಾಡಬೇಕಾಗುತ್ತದೆ. ಆದರೆ, ಪ್ರಸಕ್ತ ಸಾಲಿನಲ್ಲಿ ಇದನ್ನು ಅನಿವಾರ್ಯ ಕಾರಣಗಳಿಂದಾಗಿ ದಿನಾಂಕ 30-6-2002 ರವರೆಗೆ ವಿಸ್ತರಿಸಲಾಗಿತ್ತು.

ರಾಜ್ಯದಲ್ಲಿ ವಿದ್ಯುತ್ ದರ ಏರಿಕೆ ಬಗ್ಗೆ

24(30) -ಶ್ರೀ ಕಟ್ಟಾ ಸುಬ್ರಹ್ಮಣ್ಯ ನಾಯ್ಡು (ಶಿವಾಜಿನಗರ) : ಮಾನ್ಯ ಇಂಧನ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ವಿದ್ಯುತ್ ದರಗಳನ್ನು ಏರಿಸಬೇಕೆಂದು ಕರ್ನಾಟಕ ವಿದ್ಯುತ್ ರೆಗ್ಯುಲೇಟರಿ ಕಮೀಷನ್ ಶಿಪಾರಸ್ಸು ಮಾಡಿದೆಯೆ;

ಆ) ಈಗಿನ ವಿದ್ಯುತ್ ದರವನ್ನು ಮತ್ತೆ ಏರಿಸುವ ಬಗ್ಗೆ ತೀವ್ರ ವಿರೋಧ ಜನತೆಯಿಂದ ವ್ಯಕ್ತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;